Office of the Principal Director
Karnataka State Audit and Accounts Department,
T.T.M.C Building, 'A' Block,
3rd Floor, B.M.T.C,
Shanthinagara, Bangalore-560027
Phone No:- 080- 22215273
Fax No.:- 080- 22216500
E-mail: controllerstateaccounts@yahoo.com

ಕರ್ನಾಟಕ ರಾಜ್ಯ
ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ
ಇಲಾಖೆ

ಪ್ರಧಾನ ನಿರ್ದೇಶಕರ ಕಚೇರಿ,
ಕರ್ನಾಟಕ ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆ,
ಟಿ.ಟಿ.ಎಂ.ಸಿ ಕಟ್ಟಡ, 'ಎ' ಬ್ಲಾಕ್,
3ನೇ ಮಹಡಿ, ಬಿ.ಎಂ.ಟಿ.ಸಿ,
ಶಾಂತಿನಗರ, ಬೆಂಗಳೂರು-560027
ದೂರವಾಣಿ ಸಂಖ್ಯೆ:- 080- 22215273
ಫ್ಯಾಕ್ಸ್ ಸಂಖ್ಯೆ:- 080- 22216500
ಇ-ಮೇಲ್:controllerstateaccounts@yahoo.com

ಸಂಖ್ಯೆ: ಕರಾಲೆ & ಲೆಪ ಸಿದ್ವಿನಿ 2021-22 /174 ದಿನಾಂಕ:19.04.2023.

# ಸುತ್ತೋಲೆ

ವಿಷಯ: ರಾಜ್ಯ ಸಿವಿಲ್ ಸೇವೆಯಲ್ಲಿನ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ನಿರಾಕ್ಷೇಪಣಾ ಪ್ರಮಾಣ ಪತ್ರ ನೀಡುವ ಕುರಿತು.

ಉಲ್ಲೇಖ: ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 19 ಸೇನೆನಿ 2020, ದಿನಾಂಕ:12.10.2020.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಸರ್ಕಾರದ ಅಧಿಸೂಚನೆಯಲ್ಲಿ ಕರ್ನಾಟಕ ನಾಗರಿಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ನಿಯಮ 11 ಸರ್ಕಾರಿ ನೌಕರರ ಅರ್ಜಿಗಳಿಗೆ ಸಂಬಂಧಿಸಿದ ಕಾರ್ಯವಿಧಾನಕ್ಕೆ ತಿದ್ದುಪಡಿ ತರಲಾಗಿರುತ್ತದೆ. ಅದರನ್ವಯ ಯಾವುದೇ ಸೇವೆ ಅಥವಾ ಹುದ್ದೆಗೆ ಆಯ್ಕೆಯಾಗಲು ಅರ್ಜಿ ಸಲ್ಲಿಸುವ ಒಬ್ಬ ಸರ್ಕಾರಿ ನೌಕರನು ತನ್ನ ಅರ್ಜಿಯನ್ನು ನೇರವಾಗಿ ಆಯ್ಕೆ ಪ್ರಾಧಿಕಾರಕ್ಕೆ ಸಲ್ಲಿಸತಕ್ಕದ್ದು. ಆತನ ಆಯ್ಕೆಯನ್ನು ಅಧಿಸೂಚಿತಗೊಳಿಸಿದ ಕೂಡಲೇ, ಆತನು ಆಯ್ಕೆಯಾದ ವಾಸ್ತವಾಂಶವನ್ನು ತಾನು ಕರ್ತವ್ಯ ನಿರ್ವಹಿಸುತ್ತಿರುವ ಇಲಾಖೆಯ ಇಲಾಖಾ ಮುಖ್ಯಸ್ಥರಿಗೆ ತಿಳಿಸತಕ್ಕದ್ದು ಹಾಗೂ ಆತನು ಆಯ್ಕೆಯಾದ ಹುದ್ದೆಯ ನೇಮಕಾತಿಯನ್ನು ಒಪ್ಪಿಕೊಳ್ಳಲು ಅನುವಾಗುವಂತೆ ನಿರಾಕ್ಷೇಪಣಾ ಪ್ರಮಾಣಪತ್ರವನ್ನು ನೀಡುವಂತೆ ಕೋರತಕ್ಕದ್ದು ಎಂದು ತಿಳಿಸಲಾಗಿರುತ್ತದೆ.

ಆದ್ದರಿಂದ, ಈ ಇಲಾಖೆಯ ಎಲ್ಲಾ ಅಧಿಕಾರಿ/ ಸಿಬ್ಬಂದಿಗಳು ರಾಜ್ಯ ಸಿವಿಲ್ ಸೇವೆಯಲ್ಲಿನ ಹುದ್ದೆಗಳಿಗೆ ಅರ್ಜಿಸಲ್ಲಿಸುವಾಗ ನಿರಾಕ್ಷೇಪಣಾ ಪ್ರಮಾಣ ಪತ್ರ ಕೋರಿ ಅರ್ಜಿ ಸಲ್ಲಿಸದೇ, ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಯೊಂದಕ್ಕೆ ತಮ್ಮ ಆಯ್ಕೆ ಅಧಿಸೂಚನೆಗೊಂಡ ಕೂಡಲೇ ಆದರೆ ನೇಮಕಾತಿ ಆದೇಶ ಹೊರಡಿಸುವ ಮುನ್ನ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಕೋರುವಂತೆ ಈ ಮೂಲಕ ತಿಳಿಸಲಾಗಿದೆ.

ಪ್ರಧಾನ ನಿರ್ದೇಶಕರು
ಕರ್ನಾಟಕ ರಾಜ್ಯ ಲೆಕ್ಕಪರಿಶೋಧನೆ
ಮತ್ತು ಲೆಕ್ಕಪತ್ರ ಇಲಾಖೆ,
ಬೆಂಗಳೂರು

ಪ್ರತಿಯನ್ನು:

1. ಅಪರ ನಿರ್ದೇಶಕರು, ಪ್ರಾಂತೀಯ ಕಛೇರಿ, ಬೆಂಗಳೂರು/ಬೆಳಗಾವಿ/ ಮೈಸೂರು/ ಕಲಬುರಗಿ.
2. ಎಲ್ಲಾ ಸ್ಥಳೀಯ ಲೆಕ್ಕ ಪರಿಶೋಧನಾ ವರ್ತುಲಗಳಿಗೆ.
3. ಈ ಇಲಾಖೆಯ ಎಲ್ಲಾ ಅಧಿಕಾರಿ/ ಸಿಬ್ಬಂದಿ ವರ್ಗದವರಿಗೆ.
4. ಸಿಸ್ಟಮ್ ಅನಾಲಿಸ್ಟ್ - ಇಲಾಖಾ ಅಂತರ್ಜಾಲದಲ್ಲಿ ಪ್ರಕಟಿಸಲು.
5. ಕಛೇರಿ ಪ್ರತಿ.